**All India Radio: Bangalore**
**National Bulletin In Kannada**
**13.05.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**13.05.2026 1.10 p.m.**

**<><><><>**

ಮುಖ್ಯಾಂಶಗಳು

1. ತಮಿಳುನಾಡು ವಿಧಾನಸಭೆಯಲ್ಲಿ ವಿಶ್ವಾಸಮತ ಗೆದ್ದ ಸಿ.ಜೋಸೆಫ್ ವಿಜಯ್ ನೇತೃತ್ವದ ಟಿವಿಕೆ ಸರ್ಕಾರ
2. ಇಂಧನ ಉಳಿಸಲು ಪ್ರಧಾನಿ ಹಾಗೂ ಗೃಹ ಸಚಿವರ ಬೆಂಗಾವಲು ಪಡೆಯ ವಾಹನಗಳ ಸಂಖ್ಯೆಯಲ್ಲಿ ಗಣನೀಯ ಕಡಿತ
3. ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ಪಾಲ್ಗೊಳ್ಳಲು ಭಾರತಕ್ಕೆ ಆಗಮಿಸಿದ ಚಿಲಿ ಮತ್ತು ಇಂಡೋನೇಷ್ಯಾ ವಿದೇಶಾಂಗ ಸಚಿವರು
4. ಚಿನ್ನ ಮತ್ತು ಬೆಳ್ಳಿ ಬೆಲೆಯಲ್ಲಿ ಭಾರಿ ಏರಿಕೆ; ಆಮದು ಸುಂಕ ಶೇಕಡಾ ೧೫ಕ್ಕೆ ಹೆಚ್ಚಳ
5. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು- ಕೊಲ್ಕತ್ತಾ ನೈಟ್ ರೈಡರ್ಸ್ ಮುಖಾಮುಖಿ

<><><><>

ತಮಿಳುನಾಡು ವಿಧಾನಸಭೆಯಲ್ಲಿ ಇಂದು ನಡೆದ ವಿಶ್ವಾಸಮತ ಪರೀಕ್ಷೆಯಲ್ಲಿ ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ-ಟಿವಿಕೆ ಸರ್ಕಾರ ಜಯ ಸಾಧಿಸಿದೆ. ಸದನದಲ್ಲಿ ನಡೆದ ಮತದಾನದ ವೇಳೆ, ಒಟ್ಟು ೧೪೪ ಶಾಸಕರು ಸರ್ಕಾರದ ಪರವಾಗಿ ಮತ ಚಲಾಯಿಸುವ ಮೂಲಕ ಬಹುಮತ ಸಾಬೀತುಪಡಿಸಿದರು. ವಿಶ್ವಾಸಮತ ನಿರ್ಣಯದ ವಿರುದ್ಧ ೨೨ ಶಾಸಕರು ಮತ ಚಲಾಯಿಸಿದ್ದಾರೆ. ಐವರು ಶಾಸಕರು ಮತದಾನದಿಂದ ದೂರ ಉಳಿದರು. ಪ್ರಮುಖ ಪ್ರತಿಪಕ್ಷವಾದ ಡಿಎಂಕೆ ವಿಶ್ವಾಸಮತ ಪ್ರಕ್ರಿಯೆ ವೇಳೆ, ಸಭಾತ್ಯಾಗ ಮಾಡಿತು. ಪ್ರತಿಪಕ್ಷಗಳ ಗೈರು ಹಾಜರಿ ನಡುವೆ ನಡೆದ ಮತದಾನದಲ್ಲಿ ಟಿವಿಕೆ ಸರ್ಕಾರ ಬಹುಮತ ಪಡೆಯುವಲ್ಲಿ ಯಶಸ್ವಿಯಾಯಿತು.

<><><><>

ಆಲ್ ಇಂಡಿಯಾ ಎನ್‌ಆರ್ ಕಾಂಗ್ರೆಸ್ ಪಕ್ಷದ ಮುಖಂಡ ಎನ್.ರಂಗಸಾಮಿ ದಾಖಲೆಯ ಐದನೇ ಬಾರಿಗೆ ಪುದುಚೆರಿ ಮುಖ್ಯಮಂತ್ರಿಯಾಗಿ ಇಂದು ಪ್ರಮಾಣವಚನ ಸ್ವೀಕರಿಸಿದರು. ಲೋಕನಿವಾಸದಲ್ಲಿ ನಡೆದ ಸಮಾರಂಭದಲ್ಲಿ ಲೆಫ್ಟಿನೆಂಟ್ ಗವರ್ನರ್ ಕೆ.ಕೈಲಾಶನಾಥನ್ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

<><><><>

ಪಶ್ಚಿಮ ಏಷ್ಯಾದ ಬಿಕ್ಕಟ್ಟಿನ ಹಿನ್ನೆಲೆ ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸುವ ಮತ್ತು ಆಮದು ಇಂಧನದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ತಮ್ಮ ಬೆಂಗಾವಲು ಪಡೆಯ ಗಾತ್ರವನ್ನು ಗಮನಾರ್ಹವಾಗಿ ಕಡಿತಗೊಳಿಸಿದ್ದಾರೆ. ಇತ್ತೀಚಿನ ಗುಜರಾತ್ ಮತ್ತು ಅಸ್ಸಾಂ ರಾಜ್ಯ ಭೇಟಿ ವೇಳೆ ಈ ಬದಲಾವಣೆಯನ್ನು ಜಾರಿಗೆ ತರಲಾಗಿದ್ದು, ವಿಶೇಷ ರಕ್ಷಣಾ ಪಡೆಯ ಶಿಷ್ಟಾಚಾರದ ಅಡಿಯಲ್ಲಿ ಅಗತ್ಯವಿರುವ ಎಲ್ಲಾ ಭದ್ರತಾ ವ್ಯವಸ್ಥೆಗಳನ್ನು ಯಥಾವತ್ತಾಗಿ ಉಳಿಸಿಕೊಳ್ಳಲಾಗಿದೆ ಎಂದು ವರದಿಯಾಗಿದೆ. ತಮ್ಮ ಬೆಂಗಾವಲು ಪಡೆಯಲ್ಲಿ ವಾಹನಗಳ ಸಂಖ್ಯೆಯನ್ನು ಕಡಿಮೆ ಮಾಡುವುದರ ಜೊತೆಗೆ, ಸಾಧ್ಯವಿರುವ ಕಡೆಗಳಲ್ಲಿ ಹೊಸದಾಗಿ ಖರೀದಿಸದೇ ಲಭ್ಯವಿರುವ ಎಲೆಕ್ಟ್ರಿಕ್ ವಾಹನಗಳನ್ನು ಬಳಸುವಂತೆ ಪ್ರಧಾನಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪರಿಸರ ಸ್ನೇಹಿ ಪರ್ಯಾಯ ವ್ಯವಸ್ಥೆಯನ್ನು ಅಳವಡಿಸಿಕೊಳ್ಳುವಂತೆ ನಾಗರಿಕರಿಗೆ ಪ್ರಧಾನಿ ನೀಡಿದ್ದ ಏಳು ಮನವಿಗಳ ಭಾಗವಾಗಿ ಈ ಕ್ರಮ ಕೈಗೊಳ್ಳಲಾಗಿದೆ. ಪ್ರಧಾನಮಂತ್ರಿಯವರ ಈ ನಿರ್ಧಾರವನ್ನು ಅನುಸರಿಸಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೂ ಸಹ ತಮ್ಮ ಬೆಂಗಾವಲು ಪಡೆಯ ಗಾತ್ರವನ್ನು ಅರ್ಧಕ್ಕಿಂತ ಹೆಚ್ಚು ಕಡಿತಗೊಳಿಸಿದ್ದಾರೆ. ಭದ್ರತೆಗೆ ಯಾವುದೇ ಧಕ್ಕೆ ಬಾರದಂತೆ ಇಂಧನ ಉಳಿತಾಯ ಮತ್ತು ಸುಸ್ಥಿರತೆಗೆ ಆದ್ಯತೆ ನೀಡುವ ಮೂಲಕ ನಾಯಕರು ಜನಸಾಮಾನ್ಯರಿಗೆ ಮಾದರಿಯಾಗಿದ್ದಾರೆ.

<><><><>

೧೯೯೮ ರ ಪೋಖ್ರಾನ್ ಪರಮಾಣು ಪರೀಕ್ಷೆಗಳು ಜಗತ್ತಿಗೆ ಭಾರತದ ಅಚಲ ಸಂಕಲ್ಪವನ್ನು ಪ್ರದರ್ಶಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಆಪರೇಷನ್ ಶಕ್ತಿಯ ಸ್ಮರಣಾರ್ಥ ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಪ್ರಧಾನಿ, ಜಾಗತಿಕ ಮಟ್ಟದ ಎಲ್ಲಾ ಒತ್ತಡಗಳನ್ನು ಮೀರಿ ಭಾರತ ತನ್ನ ಪರಮಾಣು ಗುರಿಯನ್ನು ಯಶಸ್ವಿಯಾಗಿ ತಲುಪಿತು ಎಂದು ಸ್ಮರಿಸಿದ್ದಾರೆ

<><><>

ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ಪಾಲ್ಗೊಳ್ಳಲು ಭಾರತಕ್ಕೆ ಆಗಮಿಸಿರುವ ಚಿಲಿ ವಿದೇಶಾಂಗ ಸಚಿವ ಫ್ರಾನ್ಸಿಸ್‌ಕೊ ಪೆರೆಜ್ ಮಕ್ಕೆನ್ನಾ ಅವರನ್ನು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಭೇಟಿಯಾದರು. ಈ ವೇಳೆ ಅವರು, ಆದ್ಯತಾ ಉತ್ಪನ್ನಗಳ ರಫ್ತಿಗೆ ಉತ್ತೇಜನ ನೀಡಲು ಮತ್ತು ಸೇವಾ ಆರ್ಥಿಕತೆಗೆ ವೇಗ ನೀಡಲು ದ್ವಿಪಕ್ಷೀಯ ಸಹಕಾರ ಬಲಪಡಿಸುವ ಕುರಿತು ಮಾತುಕತೆ ಡೆಸಿದ್ದಾರೆ. ಇಂಡೋನೇಷ್ಯಾದ ವಿದೇಶಾಂಗ ಸಚಿವ ಸುಗಿಯೋನೊ ಇಂದು ಬೆಳಿಗ್ಗೆ ನವದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದರು. ನಾಳೆಯಿಂದ ಪ್ರಾರಂಭವಾಗುವ ಎರಡು ದಿನಗಳ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲು ಅವರು ಭಾರತಕ್ಕೆ ಭೇಟಿ ನೀಡಿದ್ದಾರೆ. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಈ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸದಸ್ಯ ಮತ್ತು ಪಾಲುದಾರ ರಾಷ್ಟ್ರಗಳ ಬ್ರಿಕ್ಸ್ ವಿದೇಶಾಂಗ ಸಚಿವರು ಮತ್ತು ನಿಯೋಗದ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರನ್ನು ಸಹ ಭೇಟಿ ಮಾಡಲಿದ್ದಾರೆ. ಸಭೆಯಲ್ಲಿ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು ಪರಸ್ಪರ ಹಿತಾಸಕ್ತಿಯ ಜಾಗತಿಕ ಮತ್ತು ಪ್ರಾದೇಶಿಕ ವಿಷಯಗಳ ಕುರಿತು ವಿಚಾರ ವಿನಿಮಯ ಮಾಡಿಕೊಳ್ಳಲಿದ್ದಾರೆ.

<><><>

ಶೀಯ ಮಾರುಕಟ್ಟೆಯಲ್ಲಿ ಇಂದು ಚಿನ್ನ ಮತ್ತು ಬೆಳ್ಳಿಯ ಬೆಲೆಯಲ್ಲಿ ಶೇಕಡಾ ಆರರಷ್ಟು ಭಾರೀ ಏರಿಕೆ ಕಂಡುಬಂದಿದೆ. ಬಹು ಸರಕು ವಿನಿಮಯ ಕೇಂದ್ರ ಮಾರುಕಟ್ಟೆಯಲ್ಲಿ ಜೂನ್ ಒಪ್ಪಂದದ ಚಿನ್ನದ ಬೆಲೆ ಶೇಕಡಾ ೬ರಷ್ಟು ಏರಿಕೆಯಾಗಿ ಪ್ರತಿ ೧೦ ಗ್ರಾಂಗೆ ೧ ಲಕ್ಷ ೬೨ ಸಾವಿರದ ೫೯೭ ರೂಪಾಯಿಗೆ ತಲುಪಿದೆ. ಅದೇ ರೀತಿ, ಜುಲೈ ಒಪ್ಪಂದದ ಬೆಳ್ಳಿ ಬೆಲೆಯು ಶೇಕಡಾ ೬.೪ರಷ್ಟು ಏರಿಕೆಯಾಗಿ ಪ್ರತಿ ಕಿಲೋಗ್ರಾಂಗೆ ೨ ಲಕ್ಷದ ೯೬ ಸಾವಿರದ ೮೨೧ ರೂಪಾಯಿ ಗಡಿ ತಲುಪಿದೆ ಎಂದು ವರದಿಯಾಗಿದೆ. ಬೆಲೆ ಏರಿಕೆಯ ಬೆನ್ನಲ್ಲೇ ಸರ್ಕಾರವು ಚಿನ್ನ ಮತ್ತು ಬೆಳ್ಳಿಯ ಮೇಲಿನ ಸೆಸ್ ಒಳಗೊಂಡಂತೆ ಆಮದು ಸುಂಕವನ್ನು ಶೇಕಡಾ ೬ ರಿಂದ ಶೇಕಡಾ ೧೫ಕ್ಕೆ ಏರಿಸಿದೆ. ಇದಲ್ಲದೆ, ಪ್ಲಾಟಿನಂ ಮೇಲಿನ ಆಮದು ಸುಂಕವನ್ನು ಶೇಕಡಾ ೬.೪ ರಿಂದ ಶೇಕಡಾ ೧೫.೪ಕ್ಕೆ ಹೆಚ್ಚಿಸಲಾಗಿದ್ದು, ಈ ಕ್ರಮವು ಮಾರುಕಟ್ಟೆಯ ಮೇಲೆ ತೀವ್ರ ಪರಿಣಾಮ ಬೀರಿದೆ. ಇಂಧನ

ಉಳಿತಾಯ ಮತ್ತು ಆರ್ಥಿಕ ಸ್ಥಿರತೆಯ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುತ್ತಿರುವ ವಿವಿಧ ಕ್ರಮಗಳ ನಡುವೆಯೇ ಈ ತೆರಿಗೆ ಹೆಚ್ಚಳದ ನಿರ್ಧಾರ ಹೊರಬಿದ್ದಿದೆ.

<><><><>

ನೀಟ್-ಯುಜಿ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ತನಿಖೆಗಾಗಿ ಕೇಂದ್ರೀಯ ತನಿಖಾ ದಳ ಸಿಬಿಐ ತಂಡ ರಾಜಸ್ಥಾನದ ಜೈಪುರಕ್ಕೆ ಆಗಮಿಸಿದ್ದು, ತನಿಖೆಯನ್ನು ತೀವ್ರಗೊಳಿಸಿದೆ. ರಾಜಸ್ಥಾನ ಪೊಲೀಸರ ವಿಶೇಷ ಕಾರ್ಯಾಚರಣೆ ತಂಡ ಈಗಾಗಲೇ ವಶಕ್ಕೆ ಪಡೆದಿದ್ದ ಸುಮಾರು ೧೪ ಜನರನ್ನು ಸಿಬಿಐ ಅಧಿಕಾರಿಗಳು ವಿಚಾರಣೆಗೆ ಒಳಪಡಿಸಿದ್ದಾರೆ. ಈ ನಡುವೆ ಸಿಕಾರ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿಶೇಷ ಕಾರ್ಯಾಚರಣೆ ತಂಡ ನೂರಾರು ಜನರನ್ನು ವಿಚಾರಣೆಗೆ ಒಳಪಡಿಸಿದೆ. ಈ ನಡುವೆ ಸಿಬಿಐ ಪ್ರಕರಣದ ತನಿಖೆಯ ಜಾಲವನ್ನು ಕೇರಳಕ್ಕೂ ವಿಸ್ತರಿಸಿದೆ. ರಾಜ್ಯದ ಎರಡು ಜಿಲ್ಲೆಗಳ ವಿದ್ಯಾರ್ಥಿಗಳು ಪ್ರಶ್ನೆ ಪತ್ರಿಕೆ ಸೋರಿಕೆಯಲ್ಲಿ ಭಾಗಿಯಾಗಿರುವ ಹಿನ್ನೆಲೆ ತನಿಖೆ ನಡೆಯುತ್ತಿದೆ. ಪರೀಕ್ಷೆಗಿಂತ ಕೆಲ ದಿನಗಳ ಮೊದಲೇ ಸೋರಿಕೆಯಾದ ಅಸಲಿ ಪ್ರಶ್ನೆ ಪತ್ರಿಕೆಯನ್ನು ಆಧರಿಸಿ ಸಿದ್ಧಪಡಿಸಲಾದ ಮಾದರಿ ಪ್ರಶ್ನೆಪತ್ರಿಕೆ ಕೇರಳದ ಹಲವು ವಿದ್ಯಾರ್ಥಿಗಳಿಗೆ ತಲುಪಿದೆ ಎಂದು ತನಿಖಾ ಸಂಸ್ಥೆ ಶಂಕೆ ವ್ಯಕ್ತಪಡಿಸಿದೆ.

<><><><>

ಮಾದಕ ದ್ರವ್ಯ ಜಾಲದ ಪ್ರಮುಖ ರೂವಾರಿ ಹಾಗೂ ಹಲವು ಪ್ರಕರಣ ಪೊಲೀಸರಿಗೆ ಬೇಕಾಗಿದ್ದ ಅಪರಾಧಿ ಪ್ರಭದೀಪ್ ಸಿಂಗ್‌ನನ್ನು ಅಜೆರ್ಬೈಜಾನ್‌ನಿಂದ ಭಾರತಕ್ಕೆ ಕರೆ ತರುವಲ್ಲಿ ಸಿಬಿಐ ಯಶಸ್ವಿಯಾಗಿದೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯ, ಗೃಹ ಸಚಿವಾಲಯ ಮತ್ತು ದೆಹಲಿ ಪೊಲೀಸರ ಸಮನ್ವಯದೊಂದಿಗೆ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಸಿಬಿಐ ತಿಳಿಸಿದೆ. ದೆಹಲಿ ಪೊಲೀಸ್ ವಿಶೇಷ ಘಟಕದಲ್ಲಿ ದಾಖಲಾಗಿದ್ದ ಎನ್‌ಡಿಪಿಎಸ್ ಕಾಯ್ದೆಯಡಿ ದಾಖಲಾದ ಪ್ರಕರಣದಲ್ಲಿ ಪ್ರಭದೀಪ್ ಸಿಂಗ್ ಬೇಕಾಗಿದ್ದನು. ಈ ಪ್ರಕರಣದಲ್ಲಿ ಈಗಾಗಲೇ ಬೃಹತ್ ಪ್ರಮಾಣದ ಮಾದಕ ದ್ರವ್ಯಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಹಲವು ಸಹ-ಆರೋಪಿಗಳನ್ನು ಬಂಧಿಸಲಾಗಿದೆ. ಈ ಇಡೀ ಜಾಲದ ರೂವಾರಿಯಾಗಿ ಪ್ರಭದೀಪ್ ಸಿಂಗ್ ಕಾರ್ಯನಿರ್ವಹಿಸುತ್ತಿದ್ದ ಎಂದು ತನಿಖಾ ಸಂಸ್ಥೆ ಹೇಳಿದೆ. ಇಂತಹ ನಿರಂತರ ಸಮನ್ವಯದ ಪ್ರಯತ್ನಗಳಿಂದಾಗಿ ಕಳೆದ ಕೆಲವು ವರ್ಷಗಳಲ್ಲಿ ೧೬೦ಕ್ಕೂ ಹೆಚ್ಚು ಅಪರಾಧಿಗಳನ್ನು ಭಾರತಕ್ಕೆ ಮರಳಿ ಕರೆತರಲಾಗಿದೆ ಎಂದು ಸಂಸ್ಥೆ ಮಾಹಿತಿ ನೀಡಿದೆ.

<><><><>

ಸಮಾಜವಾದಿ ಪಕ್ಷದ ಸಂಸ್ಥಾಪಕ ದಿವಂಗತ ಮುಲಾಯಂ ಸಿಂಗ್ ಯಾದವ್ ಅವರ ಕಿರಿಯ ಪುತ್ರ ೩೮ ವರ್ಷದ ಪ್ರತೀಕ್ ಯಾದವ್ ಇಂದು ಬೆಳಗ್ಗೆ ಲಖ್ನೋದಲ್ಲಿ ನಿಧನರಾಗಿದ್ದಾರೆ. ತಮ್ಮ ನಿವಾಸದಲ್ಲಿ ಅನಾರೋಗ್ಯಕ್ಕೀಡಾದ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ ಅದಾಗಲೇ ಅವರು ಮೃತಪಟ್ಟಿದ್ದರು ಎಂದು ವರಿದಿಯಾಗಿದೆ.

<><><><>

ಕೈಲಾಸ ಮಾನಸ ಸರೋವರ ಯಾತ್ರೆ ಕೈಗೊಳ್ಳಲು ಆಸಕ್ತಿ ಇರುವ ಸಾರ್ವಜನಿಕರು ಇದೇ ೧೯ರೊಳಗೆ ಅರ್ಜಿ ಸಲ್ಲಿಸುವಂತೆ ವಿದೇಶಾಂಗ ಸಚಿವಾಲಯ ಕೋರಿದೆ. ನೋಂದಣಿ ಪ್ರಕ್ರಿಯೆ ಶೀಘ್ರದಲ್ಲೇ ಮುಕ್ತಾಯಗೊಳ್ಳಲಿದ್ದು, ಆಸಕ್ತರು ಹೆಚ್ಚಿನ ಮಾಹಿತಿ ಹಾಗೂ ನೋಂದಣಿಗಾಗಿ ಅಧಿಕೃತ ಜಾಲತಾಣ ಞಟಥಿ.ರಅತಎಟಿ ಗೆ ಭೇಟಿ ನೀಡಬಹುದು.

<><><><>

ಉಜ್ಬೇಕಿಸ್ತಾನದ ತಾಷ್ಕೆಂಟ್‌ನಲ್ಲಿ ನಡೆಯುತ್ತಿರುವ ಏಷ್ಯನ್ ಬಾಕ್ಸಿಂಗ್ ೧೭ ವರ್ಷದೊಳಗಿನವರ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಲಕ್ಷಯ್ ಫೋಗಟ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ.

<><><><>

ನವ ರಾಯ್‌ಪುರದ ಶಯೀದ್ ವೀರನಾರಾಯಣ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಕೊಲ್ಕತ್ತಾ ನೈಟ್‌ರೈಡರ್ಸ್ ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡದ ವಿರುದ್ಧ ಗುಜರಾತ್ ಟೈಟನ್ಸ್ ೮೨ ರನ್‌ಗಳ ಭರ್ಜರಿ ಜಯ ಸಾಧಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>